# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 159 (193) |
| ಉತ್ತರಿಸುವ ದಿನಾಂಕ | 11-07-2018 |
| ಮಾನ್ಯ ಸದಸ್ಯರ ಹೆಸರು | ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | ಕಂದಾಯ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು |

| .ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಉಪ ನೋಂದಣಾಧಿಕಾರಿಗಳ (ಸಬ್ ರಿಜಿಸ್ಟ್ರಾರ್) ಕಛೇರಿಗಳಲ್ಲಿ ಮಧ್ಯವರ್ತಿಗಳ ಹಾವಳಿ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ | ನೊಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ಮಧ್ಯವರ್ತಿಗಳ ಹಾವಳಿ ಹೆಚ್ಚಾಗುತ್ತಿರುವ ಬಗ್ಗೆ ಯಾವುದೇ ಲಿಖಿತ ದೂರುಗಳು ಬಂದಿರುವುದಿಲ್ಲ |
| ಆ. | ಬಂದಿದ್ದಲ್ಲಿ, ಮಧ್ಯವರ್ತಿ ಹಾವಳಿ ತಡೆಗಟ್ಟುವಂತೆ ಈವರೆಗೂ ಸರ್ಕಾರಕ್ಕೆ ಬಂದಿರುವ ದೂರುಗಳ ಸಂಖ್ಯೆ ಎಷ್ಟು; ಅವು ಯಾವುವು; | |
| ಇ. | ಸದರಿ ಮಧ್ಯವರ್ತಿ ಹಾವಳಿಗೆ ನಿರ್ಬಂಧ ಹೇರಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಉಪನೋಂದಣಿ ಕಛೇರಿಗಳಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ಹಾಗೂ ಇಲಾಖೆಯಲ್ಲಿ ಪಾರದರ್ಶಕತೆಯನ್ನು ತರಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.<br>1) ಉಪನೋಂದಣಿ ಕಛೇರಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಇಲಾಖೆ ಅಧಿಕಾರಿಗಳು/ ಸಿಬ್ಬಂದಿ ವರ್ಗದವರು, ಕಂಪ್ಯೂಟರ್ ಆಪರೇಟರ್‌ಗಳು ಮತ್ತು ಹೊರಗುತ್ತಿಗೆ ಸಿಬ್ಬಂದಿಗಳು ಕಡ್ಡಾಯವಾಗಿ ಭಾವಚಿತ್ರ ಇರುವ ಗುರುತಿನ ಚೀಟಿಯನ್ನು ಧರಿಸುವಂತೆ ನಿರ್ದೇಶನ ನೀಡಿ ಸುತ್ತೋಲೆ ಹೊರಡಿಸಲಾಗಿದೆ.<br>2) ಸಾರ್ವಜನಿಕರಿಗೆ ಅನುಕೂಲವಾಗುವಂತೆ ಕಾವೇರಿ ಆನ್‌ಲೈನ್ ಸೇವೆಗಳನ್ನು ಅಭಿವೃದ್ಧಿ ಪಡಿಸಲಾಗಿದ್ದು, ಈ ಕೆಳಕಂಡ ಸೇವೆಗಳನ್ನು ಉಪನೋಂದಣಿ ಕಛೇರಿಗಳಿಗೆ ಭೇಟಿ ಮಾಡದೇ ಆನ್‌ಲೈನ್ ಮುಖಾಂತರ ಪಡೆಯಬಹುದಾಗಿದೆ.<br>i. ಸ್ಥಿರಾಸ್ತಿಗಳ ಋಣಭಾರ ಪ್ರಮಾಣ ಪತ್ರ/ ನೋಂದಾಯಿತ ದಸ್ತಾವೇಜುಗಳ ದೃಢೀಕೃತ ನಕಲು ಪ್ರತಿ ಪೂರೈಸುವಿಕೆ<br>ii. ಸ್ಥಿರಾಸ್ತಿಗಳ ಮೌಲ್ಯ ಮತ್ತು ಮುದ್ರಾಂಕ ಶುಲ್ಕಗಳ ಲೆಕ್ಕ ಹಾಕುವಿಕೆ<br>iii. ಉಪನೊಂದಣಿ ಕಚೇರಿಯ ಗುರುತಿಸುವಿಕೆ<br>iv. ವಿವಾಹ ನೋಂದಣಿ ಕಛೇರಿಯ ಗುರುತಿಸುವಿಕೆ<br>v. ವ್ಯಾಪಾರ ಸಂಸ್ಥೆ ನೋಂದಣಿಯನ್ನು ಆನ್‌ಲೈನ್‌ನಲ್ಲಿ ನಿರ್ವಹಿಸುವುದು. ಮುಂದುವರೆದಂತೆ ಸಾರ್ವಜನಿಕರು ತಮ್ಮ ದಸ್ತಾವೇಜಿಗೆ ಸಂಬಂಧಿಸಿದ ನೊಂದಣಿ ಪೂರ್ವ ಡೇಟಾ ಎಂಟ್ರಿಗಳನ್ನು ಆನ್‌ಲೈನ್‌ನಲ್ಲಿ ಮಾಡಿ, ದಸ್ತಾವೇಜಿನ ನೊಂದಣಿಗೆ ಮುಂಗಡವಾಗಿ ಕಾಲ ನಿಗದಿಪಡಿಸಿಕೊಳ್ಳುವುದನ್ನು (Appointment Booking) ಜಾರಿಗೆ ತರಲು ಕ್ರಮ ಕೈಗೊಳ್ಳಲಾಗುತ್ತಿದೆ. |

ಸಂಖ್ಯೆ: ಕಂಇ 95 ಮುನೋಸ 2018

ಆರ್.ವಿ.ದೇಶಪಾಂಡೆ
ಕಂದಾಯ ಮತ್ತು ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು